**All India Radio: Bangalore**
**National Bulletin In Kannada**
**27.12.2025  1.10 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**27.12.2025  1.10 p.m.**
**<><><><>**

ಮುಖ್ಯಾಂಶಗಳು

1. ಕಾರವಾರದ ನೌಕಾನೆಲೆಗೆ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
2. ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು
3. ಇಂಡಿಗೋ ವಿಮಾನಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ; ವರದಿ ಸಲ್ಲಿಸಿದ ತನಿಖಾ ಸಮಿತಿ
4. ಕದನ ವಿರಾಮಕ್ಕೆ ಕಾಂಬೋಡಿಯಾ - ಥೈಲ್ಯಾಂಡ್ ಪರಸ್ಪರ ಒಪ್ಪಿಗೆ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಕರ್ನಾಟಕ, ಗೋವಾ ಮತ್ತು ಜಾರ್ಖಂಡ್‌ಗೆ ನಾಲ್ಕು ದಿನಗಳ ಭೇಟಿ ನೀಡಲಿದ್ದಾರೆ.  ಅವರು ಇಂದು ಸಂಜೆ ಗೋವಾಕ್ಕೆ ತೆರಳಲಿದ್ದಾರೆ. ನಾಳೆ ಕರ್ನಾಟಕದ ಕಾರವಾರದಲ್ಲಿರುವ ನೌಕಾ ನೆಲೆಯ ಜಲಾಂತಾರ್ಗಾಮಿ ನೌಕೆಯಲ್ಲಿ ಪ್ರಯಾಣಿಸಲಿದ್ದಾರೆ. ಬಳಿಕ ಇದೇ ೨೯ ರಂದು ಜಾರ್ಖಂಡ್‌ನ ಜಮ್‌ಶಡ್‌ಪುರದಲ್ಲಿ ನಡೆಯಲಿರುವ ಓಲ್ ಚಿಕಿ ಲಿಪಿಯ ಶತಮಾನೋತ್ಸವ ಸಮಾರಂಭದಲ್ಲಿ ರಾಷ್ಟ್ರಪತಿ ಅವರು ಭಾಗವಹಿಸಲಿದ್ದಾರೆ. ಅದೇ ದಿನ, ಜಮ್‌ಶಡ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ-ಎನ್‌ಐಟಿ ೧೫ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ ರಂದು ಅವರು ದುಮ್ಲಾದಲ್ಲಿ ನಡೆಯುವ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ನವದೆಹಲಿಯಲ್ಲಿ ಮೂರು ದಿನಗಳ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನ ನಡೆಯುತ್ತಿದೆ. ಇಂದು ಮತ್ತು ನಾಳೆ ಪ್ರಧಾನಿ ನರೇಂದ್ರ ಮೋದಿ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಅಭಿವೃದ್ಧಿ ಆದ್ಯತೆಗಳ ಕುರಿತು ರಚನಾತ್ಮಕ ಹಾಗೂನಿರಂತರ ಸಂವಾದದ ಮೂಲಕ ಕೇಂದ್ರ - ರಾಜ್ಯ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಈ ಸಮ್ಮೇಳನ ಮತ್ತೊಂದು ಪ್ರಮುಖ ಮೈಲಿಗಲ್ಲಾಗಲಿದೆ.  ಈ ಸಮ್ಮೇಳನ, ಕೇಂದ್ರ ಮತ್ತು ರಾಜ್ಯಗಳು ಸಹಕರಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅಲ್ಲದೇ, ಭಾರತದ ಮಾನವ ಬಂಡವಾಳ ಸಾಮರ್ಥ್ಯ ಹೆಚ್ಚಿಸಲು ಮತ್ತು ಸಮಗ್ರ ಬೆಳವಣಿಗೆಯನ್ನು ತ್ವರಿತಗೊಳಿಸಲು ಏಕೀಕೃತ ಮಾರ್ಗಸೂಚಿಯನ್ನು ವಿನ್ಯಾಸಗೊಳಿಸುತ್ತದೆ. ಸಾಮಾನ್ಯ ಅಭಿವೃದ್ಧಿ ಕಾರ್ಯಸೂಚಿಯನ್ನು ಅಂತಿಮಗೊಳಿಸುವ ಗುರಿ ಹೊಂದಿರುವ ಚರ್ಚೆಗಳಿಗೆ ಸಮ್ಮೇಳನ ವೇದಿಕೆ ಒದಗಿಸಲಿದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಅನುಸರಿಸಬೇಕಾದ ಉತ್ತಮ ಅಭ್ಯಾಸ ಮತ್ತು ತಂತ್ರಗಳನ್ನು ಒಳಗೊಂಡ "ವಿಕಸಿತ ಭಾರತಕ್ಕಾಗಿ ಮಾನವ ಬಂಡವಾಳ" ಎಂಬ ವಿಷಯದ ಕುರಿತು ಈ ಸಮ್ಮೇಳನ ಗಮನಹರಿಸುತ್ತದೆ.

<><><><>

ಇಂದು ೧೦ನೇ ಮತ್ತು ಕೊನೆಯ ಸಿಖ್ ಧರ್ಮಗುರು ಶ್ರೀ ಗುರು ಗೋವಿಂದ್ ಸಿಂಗ್ ಅವರ ಪವಿತ್ರ ಪರ್ಕಾಶ್ ಉತ್ಸವ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ರಾಷ್ಟ್ರಪತಿ ಅವರು, ಗುರು ಗೋವಿಂದ್ ಸಿಂಗ್, ಅಪ್ರತಿಮ ಧೈರ್ಯ ಮತ್ತು ಚಾಣಾಕ್ಷತೆಯಿಂದ ಜನರು ನೀತಿವಂತರಾಗಿ ಬದುಕುವಂತೆ ಪ್ರೇರೇಪಿಸಿದರು. ಅವರು ತಮ್ಮ ಅನುಯಾಯಿಗಳನ್ನು ನ್ಯಾಯ ಮತ್ತು ಸ್ವಾಭಿಮಾನದ ಆದರ್ಶಗಳನ್ನು ಮೈಗೂಡಿಸಿಕೊಳ್ಳುವಂತೆ ಹಾಗೂ ಅತ್ಯಂತ ಪ್ರಬಲ ವಿರೋಧಿಗಳನ್ನು ಧೈರ್ಯದಿಂದ ಎದುರಿಸುವ ಶಕ್ತಿಯಾಗಿ ಬೆಸೆದರು ಎಂದು ಹೇಳಿದ್ದಾರೆ. ಇದೇ ವೇಳೆ ಈ ವರ್ಷದ ಆರಂಭದಲ್ಲಿ ಪವಿತ್ರ ಸಿಖ್ ದೇವಾಲಯಗಳಲ್ಲಿ ಒಂದಾದ, ಶ್ರೀ ಗುರು ಗೋವಿಂದ ಸಿಂಗ್ ಅವರ ಜನ್ಮಸ್ಥಳವಾದ ತಖತ್ ಶ್ರೀ ಹರಿಮಂದಿರ್ ಜಿ ಪಾಟ್ನಾ ಸಾಹೀಬ್‌ಗೆ ಭೇಟಿ ನೀಡಿದ ಚಿತ್ರಗಳನ್ನು ಪ್ರಧಾನಿ ಮೋದಿ ಹಂಚಿಕೊಂಡಿದ್ದಾರೆ. ಗುರು ಗೋವಿಂದ್ ಸಿಂಗ್ ಅವರ ಜೀವನ ಮತ್ತು ಬೋಧನೆಗಳು ಜನರು ಸತ್ಯ, ನ್ಯಾಯ ಹಾಗೂ ಸದಾಚಾರದ ಪರ ನಿಲ್ಲಲು ಪ್ರೇರೇಪಿಸುತ್ತಿವೆ. ಅವರ ಸೇವೆ ಮತ್ತು ನಿಸ್ವಾರ್ಥ ಮನೋಭಾವ ಎಲ್ಲಾ ಪೀಳಿಗೆಗಳಿಗೆ ಮಾರ್ಗದರ್ಶನ ನೀಡಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ.

<><><><>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<><><><>

ನಾಗರಿಕ ವಿಮಾನಯಾನ ನಿರ್ದೇಶನಾಲಯದ ಜಂಟಿ ಮಹಾನಿರ್ದೇಶಕ ಸಂಜಯ್ ಕೆ. ಬ್ರಹ್ಮಣೆ ನೇತೃತ್ವದ ತನಿಖಾ ಸಮಿತಿಯು ಇತ್ತೀಚೆಗೆ ಇಂಡಿಗೋ ವಿಮಾನಗಳ ಕಾರ್ಯಾಚರಣೆಯಲ್ಲಿ ಉಂಟಾದ ಅಡಚಣೆಗಳ ಕುರಿತು ತನ್ನ ವರದಿ ಸಲ್ಲಿಸಿದೆ. ದೇಶಾದ್ಯಂತ ವಿಮಾನ ಕಾರ್ಯಾಚರಣೆಯಲ್ಲಿ ಉಂಟಾದ ಅಡಚಣೆಗಳಿಗೆ ಕಾರಣವಾದ ಅಂಶಗಳ ಕುರಿತು ಸಮಗ್ರ ತನಿಖೆ ನಡೆಸಲು ಡಿಸೆಂಬರ್ ೫ ರಂದು ನಾಲ್ಕು ಸದಸ್ಯರ ಸಮಿತಿಯನ್ನು ನಾಗರಿಕ ವಿಮಾನಯಾನ ನಿರ್ದೇಶನಾಲಯ ರಚಿಸಿತ್ತು. ಈ ಸಮಿತಿ ನಿನ್ನೆ ಸಂಜೆ ತನ್ನ ವರದಿಯನ್ನು ಸಲ್ಲಿಸಿದೆ.

<><><><>

ದೇಶಾದ್ಯಂತ ಏಕರೂಪದ ಭಯೋತ್ಪಾದನಾ ನಿಗ್ರಹ ದಳ-ಎಟಿಎಸ್ ರಚಿಸುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ ನೀಡಿದ್ದು, ಇದನ್ನು ಆದಷ್ಟು ಶೀಘ್ರ ಜಾರಿಗೆ ತರುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ನಿರ್ದೇಶನ ನೀಡಿದ್ದಾರೆ. ದೇಶಾದ್ಯಂತ ಏಕರೂಪದ ಎಟಿಎಸ್ ರಚನೆಯು ಪ್ರತಿ ಹಂತದಲ್ಲೂ ಭಯೋತ್ಪಾದಕ ದಾಳಿಗಳನ್ನು

ಎದುರಿಸಲು ಪೊಲೀಸರಿಗೆ ಒಂದೇ ಮಾದರಿಯ ಸಿದ್ಧತೆಗೆ ಅವಕಾಶ ಒದಗಿಸುತ್ತದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ ಆಯೋಜಿಸಿದ್ದ ಎರಡು ದಿನಗಳ 'ಭಯೋತ್ಪಾದನಾ ನಿಗ್ರಹ ಸಮ್ಮೇಳನ-೨೦೨೫' ಅನ್ನು ಉದ್ದೇಶಿಸಿ ಅವರು ಮಾತನಾಡಿದರು. ಏಕರೂಪದ ಎಟಿಎಸ್ ರಚನೆ ನಿಟ್ಟಿನಲ್ಲಿ ಎನ್ಐಎ ವ್ಯಾಪಕವಾಗಿ ಕೆಲಸ ಮಾಡಿದೆ. ಅಲ್ಲದೇ ಈ ಕುರಿತ ಮಾಹಿತಿಯನ್ನು ಈಗಾಗಲೇ ರಾಜ್ಯ ಪೊಲೀಸ್ ಪಡೆಗಳೊಂದಿಗೆ ಹಂಚಿಕೊಂಡಿದೆ. ಏಕರೂಪದ ಎಟಿಎಸ್ ರಚನೆಯು ದೇಶಾದ್ಯಂತ ಪ್ರತಿ ಹಂತದಲ್ಲೂ ಪ್ರಮಾಣೀಕೃತ ಸನ್ನದ್ಧತೆ ಮತ್ತು ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಖಚಿತಪಡಿಸುತ್ತದೆ ಎಂದು ಸಚಿವ ಅಮಿತ್ ಶಾ ತಿಳಿಸಿದರು.

<><><><>

ಕೇರಳದ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ೪೧ ದಿನಗಳ ಮಂಡಲ ವ್ರತದ ಅತ್ಯಂತ ಪವಿತ್ರ ಆಚರಣೆಯಾದ ಮಂಡಲ ಪೂಜೆ ಇಂದು ನಡೆಯಲಿದೆ. ಸಮಾರಂಭದ ಭಾಗವಾಗಿ, ದೇವರನ್ನು ಚಿನ್ನದ ಉಡುಪಿನಿಂದ ಅಲಂಕರಿಸಿ, ನಂತರ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಲಾಗುವುದು. ತಿರುವಾಂಕೂರು ದೇವಸ್ವಂ ಮಂಡಳಿಯು, ಜನಸಂದಣಿ ನಿರ್ವಹಣೆ, ಭದ್ರತೆ, ವೈದ್ಯಕೀಯ ಸೇವೆ ಮತ್ತು ಯಾತ್ರಿಕರಿಗಾಗಿ ಸೌಲಭ್ಯ ಅಗತ್ಯಗಳ ವ್ಯವಸ್ಥೆ ಕಲ್ಪಿಸಿದೆ. ಅಧಿಕೃತ ಮಾರ್ಗಸೂಚಿಗಳ ಪ್ರಕಾರ, ಮಂಡಲ ಪೂಜೆಯ ಅವಧಿಯಲ್ಲಿ ದರ್ಶನದ ಸುಗಮ ನಿರ್ವಹಣೆಗಾಗಿ ವರ್ಚುವಲ್ ಕ್ಯೂ ಮತ್ತು ಸೀಮಿತ ಸ್ಥಳ ಬುಕಿಂಗ್‌ಗಳ ವ್ಯವಸ್ಥೆ ಮಾಡಲಾಗಿದೆ. ಮಂಡಲ ಪೂಜೆಯ ನಂತರ ದೇವಾಲಯ ಮುಚ್ಚಲ್ಪಟ್ಟು, ಮಕರ ವಿಳಕ್ಕು ತೀರ್ಥಯಾತ್ರೆಯ ಋತುವಿನ ದಿನವಾದ ಡಿಸೆಂಬರ್ ೩೦ ರಂದು ಮತ್ತೆ ದೇವಾಲಯವನ್ನು ತೆರೆಯಲಾಗುತ್ತದೆ.

<><><><>

ಥೈಲ್ಯಾಂಡ್ ಮತ್ತು ಕಾಂಬೋಡಿಯಾ ಕದನ ವಿರಾಮಕ್ಕೆ ಸಹಿ ಹಾಕಿವೆ. ಥೈಲ್ಯಾಂಡ್‌ನ ಚಾಂಥಾಬುರಿ ಪ್ರಾಂತ್ಯದ ಗಡಿಯಲ್ಲಿ ಇಂದು ಥೈಲ್ಯಾಂಡ್ ಮತ್ತು ಕಾಂಬೋಡಿಯಾದ ರಕ್ಷಣಾ ಸಚಿವರು ಈ ಒಪ್ಪಂದಕ್ಕೆ ಸಹಿ ಹಾಕಿದರು. ಜುಲೈನಲ್ಲಿ ಕದನ ವಿರಾಮ ವಿಫಲವಾದ ನಂತರ ಈ ತಿಂಗಳ ಆರಂಭದಲ್ಲಿ ಉಭಯ ದೇಶಗಳ ನಡುವೆ ಸಂಘರ್ಷ ತೀವ್ರಗೊಂಡಿತು. ಪ್ರೀಹ್ ವಿಹಾರ್ ದೇಗುಲಕ್ಕೆ ಸಂಬಂಧಪಟ್ಟಂತೆ ಎರಡು ದೇಶಗಳ ನಡುವೆ ದಶಕಗಳಿಂದ ಘರ್ಷಣೆಗಳು ಏರ್ಪಟ್ಟಿವೆ. ಈ ದೇವಾಲಯವು ಕಾಂಬೋಡಿಯಾಗೆ ಸೇರಿದೆ ಎಂದು ೧೯೬೨ರಲ್ಲಿ ಅಂತಾರಾಷ್ಟ್ರೀಯ ನ್ಯಾಯಾಲಯ ತೀರ್ಪು ನೀಡಿದ್ದರೂ ಸಹ ದೇವಾಲಯ ಮತ್ತು ಸುತ್ತಮುತ್ತಲಿನ ಪ್ರದೇಶದ ಭೂ ಒಡೆತನಕ್ಕೆ ಸಂಬಂಧಿಸಿದಂತೆ ಎರಡೂ ದೇಶಗಳ ನಡುವೆ ಪದೇ ಪದೆ ಸೇನಾ ಸಂಘರ್ಷ ನಡೆಯುತ್ತಲೇ ಇದೆ.

<><><><>

ಉಕ್ರೇನ್ ರಾಜಧಾನಿ ಕೈವ್ ನಗರದ ಮೇಲಿಂದು ಮುಂಜಾನೆ ರಷ್ಯಾದ ಭದ್ರತಾ ಪಡೆಗಳು ದಾಳಿ ನಡೆಸಿವೆ. ನಗರದಲ್ಲಿ ಭಾರೀ ಸ್ಫೋಟಗಳ ಸದ್ದು ಕೇಳಿಬಂದಿದೆ ಎಂದು ಪ್ರತ್ಯಕ್ಷದರ್ಶಿಗಳು ಮಾಹಿತಿ ನೀಡಿದ್ದಾರೆ. ರಷ್ಯಾದ ವಾಯುಪಡೆ ಹೈಪರ್‌ಸಾನಿಕ್ ಕ್ಷಿಪಣಿಗಳು, ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಕಲಿಬರ್ ಕ್ರೂಸ್ ಕ್ಷಿಪಣಿಗಳನ್ನು ಉಡಾಯಿಸಿವೆ. ಕೈವ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಕಡಿತಗೊಂಡಿದೆ ಎಂದು ಸ್ಥಳೀಯ

ಮಾಧ್ಯಮಗಳು ವರದಿ ಮಾಡಿವೆ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಭೆಗೆ ಕೇವಲ ಒಂದು ದಿನದ ಮೊದಲು ಈ ದಾಳಿ ನಡೆದಿದೆ. ಫ್ಲೋರಿಡಾದಲ್ಲಿ ನಾಳೆ ರಷ್ಯಾ - ಉಕ್ರೇನ್ ಯುದ್ಧ ನಿಲ್ಲಿಸುವ ಸಂಬಂಧ ಝೆಲೆನ್ಸ್ಕಿ ಮತ್ತು ಟ್ರಂಪ್ ಚರ್ಚೆ ನಡೆಸಲಿದ್ದಾರೆ.

<><><>

ಸೊಮಾಲಿಯಾದಿಂದ ಬೇರ್ಪಟ್ಟ ಸೊಮಾಲಿಲ್ಯಾಂಡ್ ಪ್ರದೇಶವನ್ನು ಸ್ವತಂತ್ರ ರಾಷ್ಟ್ರವೆಂದು ಔಪಚಾರಿಕವಾಗಿ ಗುರುತಿಸಿದ ಮೊದಲ ದೇಶ ಇಸ್ರೇಲ್ ಆಗಿದೆ. ಕೃಷಿ, ಆರೋಗ್ಯ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿನ ಸಹಕಾರವನ್ನು ತಕ್ಷಣವೇ ವಿಸ್ತರಿಸಲು ಇಸ್ರೇಲ್ ಉದ್ದೇಶಿಸಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇಸ್ರೇಲ್-ಸೊಮಾಲಿಲ್ಯಾಂಡ್ ಪೂರ್ಣ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸಲು ಒಪ್ಪಿಕೊಂಡಿವೆ. ಇದರಲ್ಲಿ ರಾಯಭಾರಿಗಳ ನೇಮಕಾತಿ ಮತ್ತು ರಾಯಭಾರ ಕಚೇರಿಗಳ ತೆರೆಯುವಿಕೆ ಸೇರಿವೆ ಎಂದು ಇಸ್ರೇಲ್ ವಿದೇಶಾಂಗ ಸಚಿವ ಗಿಡಿಯಾನ್ ಸಾರ್ ತಿಳಿಸಿದ್ದಾರೆ. ಸೊಮಾಲಿಲ್ಯಾಂಡ್ ಅಧ್ಯಕ್ಷ ಅಬ್ದಿರೆಹಮಾನ್ ಮೊಹಮ್ಮದ್ ಅಬ್ದುಲ್ಲಾಹಿ, ಈ ಕ್ರಮವನ್ನು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದ್ದಾರೆ.

<><><>

ಉನ್ನಾವ್ ಅತ್ಯಾಚಾರ ಪ್ರಕರಣದಲ್ಲಿ ಉತ್ತರ ಪ್ರದೇಶದ ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್ ಅವರಿಗೆ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ, ಜಾಮೀನು ನೀಡಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ, ಕೇಂದ್ರ ತನಿಖಾ ದಳ-ಸಿಬಿಐ, ಸುಪ್ರೀಂಕೋರ್ಟ್ ಮೊರೆ ಹೋಗಿದೆ. ಹೈಕೋರ್ಟ್ ತೀರ್ಪಿನ ವಿರುದ್ಧ ಸಿಬಿಐ ನಿನ್ನೆ ಸುಪ್ರೀಂಕೋರ್ಟ್‌ನಲ್ಲಿ ವಿಶೇಷ ರಜೆ ಅರ್ಜಿ ಸಲ್ಲಿಸಿದೆ. ಕುಲದೀಪ್ ಸಿಂಗ್ ಅವರಿಗೆ ವಿಧಿಸಿದ್ದ ಜೀವಾವಧಿ ಶಿಕ್ಷೆಯ ವಿರುದ್ಧದ ಮೇಲ್ಮನವಿ ಬಾಕಿ ಇರುವಾಗ ಅವರ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ಹೈಕೋರ್ಟ್ ಈ ವಾರದ ಆರಂಭದಲ್ಲಿ ಆದೇಶಿಸಿತ್ತು ಮತ್ತು ಅವರಿಗೆ ಷರತ್ತುಬದ್ಧ ಜಾಮೀನು ಸಹ ನೀಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>